ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

28

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 16/12/20

# ಮಾಜಿ ಸಚಿವೆ ರೇಣುಕಾ ನಿಧನ

## ಗುಂಡೂರಾವ್ ಸಂಪುಟದಲ್ಲಿ ಸಚಿವೆಯಾಗಿದ್ದು | ಇಂದು ಅಂತ್ಯಕ್ರಿಯೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು



ಗುಂಡೂರಾವ್ ಸರ್ಕಾರದಲ್ಲಿ ರೇಷ್ಮೆ ಖಾತೆ ಸಚಿವರಾಗಿ ಕಾರ್ಯನಿರ್ವಹಿಸಿದ್ದ ಮಾಜಿ ಸಚಿವೆ ರೇಣುಕಾ ರಾಜೇಂದ್ರನ್ (78) ಮಂಗಳವಾರ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಅನಾರೋಗ್ಯದಿಂದ ನಿಧನರಾಗಿದ್ದಾರೆ.

ಕಳೆದ ಕೆಲವು ದಿನಗಳ ಹಿಂದೆ ಕೊರೋನಾ ಸೋಂಕಿಗೆ ತುತ್ತಾಗಿ ಗುಣಮುಖರಾಗಿದ್ದರು. ಮಂಗಳವಾರ ಹೃದಯಾಘಾತ ದಿಂದ ಮೃತಪಟ್ಟಿದ್ದು, ಬುಧವಾರ ಚಿಕ್ಕಬಳ್ಳಾಪುರದಲ್ಲಿ ಅಂತ್ಯಕ್ರಿಯೆ ನಡೆಯಲಿದೆ. ರೇಣುಕಾ ಅವರು ಇಬ್ಬರು ಪುತ್ರರು ಹಾಗೂ ಒಬ್ಬ ಪುತ್ರಿಯನ್ನು ಹೊಂದಿದ್ದರು.

### ಅಂಜನೇಯ ಸಂತಾಪ



'ಕುಟುಂಬಕ್ಕೆ ರೇಣುಕಾ ಅವರ ಅಗಲಿಕೆಯನ್ನು ಭರಿಸುವ ಶಕ್ತಿಯಲ್ಲಿ ದೇವರು ನೀಡಲಿ' ಎಂದು ಮಾಜಿ ಸಚಿವ ಎಚ್. ಆಂಜನೇಯ ಸಂತಾಪ ವ್ಯಕ್ತಪಡಿಸಿದ್ದಾರೆ.

1989ರಲ್ಲಿ ಮೂರನೇ ಬಾರಿಗೆ ಚಿಕ್ಕಬಳ್ಳಾಪುರ ಮೀಸಲು ಕ್ಷೇತ್ರದಿಂದ ವಿಧಾನಸಭೆ ಪ್ರವೇಶಿಸಿ ಮುಖ್ಯಮಂತ್ರಿ ಯಾಗಿದ್ದ ಗುಂಡೂರಾವ್ ಸರ್ಕಾರದಲ್ಲಿ ಸಂಪುಟದಲ್ಲಿ ರೇಷ್ಮೆ ಖಾತೆ ಸಚಿವೆಯಾಗಿದ್ದರು.